ವಿವರವಾದ ಯೋಜನಾ ವರದಿಯ ತಯಾರಿಕೆಯ ನಂತರ ಮುಂದಿನ ಸೂಕ್ತ ಕ್ರಮ ಜರುಗಿಸಲಾಗುವುದು.

(ಈ) ವಿವರವಾದ ಯೋಜನಾ ವರದಿಯ ತಯಾರಿಕೆಯ ನಂತರ ಇದನ್ನು ಪರಿಶೀಲಿಸಿ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಕುಡಿಯುವ ನೀರಿನ ಸಮಸ್ಯೆ

429 (740) ಶ್ರೀ ಸಂಪಂಗಿ ಎನ್. (ಬಾಗೇಪಲ್ಲಿ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಭದ್ರಾ ಮೇಲ್ದಂಡೆ ಯೋಜನೆಯಡಿ ಚಿಕ್ಕಬಳ್ಳಾಪುರ ಮತ್ತು ಬಾಗೇಪಲ್ಲಿ ಗುಡಿಬಂಡೆ ತಾಲ್ಲೂಕಿಗೆ ಕುಡಿಯುವ ನೀರಿನ ವ್ಯವಸ್ಥೆಗೆ ಯೋಜಿಸಲಾಗಿದೆಯೇ;

(ಆ) ಚಿಕ್ಕಬಳ್ಳಾಪುರ ಜಿಲ್ಲೆಗೆ ಇದೂವರೆವಿಗೂ ಕುಡಿಯುವ ನೀರಿನ ಸೌಕರ್ಯ ಒದಗಿಸದೇ ಇರಲು ಕಾರಣವೇನು;

(ಇ) ಈ ಕುಡಿಯುವ ನೀರಿನ ವ್ಯವಸ್ಥೆಗೆ ತಗಲುವ ವೆಚ್ಚ ಎಷ್ಟು; ಇದನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಜಲಸಂಪನ್ಮೂಲ ಸಚಿವರು)

(ಅ) ಅನುಮೋದಿತ ಭದ್ರಾ ಮೇಲ್ದಂಡೆ ಯೋಜನೆಯಡಿ ಚಿಕ್ಕಬಳ್ಳಾಪುರ, ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕಿಗೆ ಕುಡಿಯುವ ನೀರಿನ ವ್ಯವಸ್ಥೆಯ ಪ್ರಸ್ತಾಪವು ಇರುವುದಿಲ್ಲ.

(ಆ) ನಗರ ಹಾಗೂ ಪಟ್ಟಣ ಪಂಚಾಯಿತಿ ಪ್ರದೇಶಗಳ ಕುಡಿಯುವ ನೀರಿನ ವ್ಯವಸ್ಥೆಗೆ ಸಂಬಂಧಿಸಿದಂತೆ ನಗರಾಭಿವೃದ್ಧಿ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಗ್ರಾಮೀಣ ಪ್ರದೇಶಗಳ ಕುಡಿಯುವ ನೀರಿನ ವ್ಯವಸ್ಥೆಗೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

(ಇ) ಮೇಲಿನ ಪ್ರಶ್ನೆ (ಅ) ಗೆ ಒದಗಿಸಿರುವ ಉತ್ತರದಿಂದಾಗಿ ಸದ್ಯಕ್ಕೆ ಈ ಪ್ರಶ್ನೆ ಉದ್ಭವಿಸುವುದಿಲ್ಲ.